Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 30-08-2022

**ಪತ್ರಿಕಾ ಪ್ರಕಟಣೆ:**

## ಐ. ಓ. ಟಿ. ಒಂದು ದಿನದ ಪ್ರಾಯೋಗಿಕ ಕಾರ್ಯಗಾರ ಯಶಸ್ವಿ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ ಇಂಟರ್ನೆಟ್ ಆಫ್ ಥಿಂಗ್ಸ್ (ಐ.ಓ.ಟಿ.) ವಿಷಯದ ಮೇಲೆ ಒಂದು ದಿನದ ಪ್ರಾಯೋಗಿಕ ಕಾರ್ಯಗಾರವನ್ನು ಆಗಸ್ಟ್ 29 ರಂದು ಹಮ್ಮಿಕೊಳ್ಳಲಾಗಿತ್ತು. ಬೆಳಿಗ್ಗೆ 10 ಗಂಟೆಗೆ ಉದ್ಘಾಟನೆಗೊಂಡ ಈ ಕಾರ್ಯಗಾರಕ್ಕೆ ಮುಖ್ಯ ಅತಿಥಿಗಳು ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರಿನ ಟಿ. ಎಂ.ಐ.ಎ.ಎಲ್.ಎಸ್. ಕಂಪನಿಯ ಮಾರಾಟ ಮತ್ತು ಮಾರ್ಕೆಟಿಂಗ್ ವಿಭಾಗದ ಉಪಾಧ್ಯಕ್ಷರಾದ ಶ್ರೀ. ಸುನಿಲ್ ಟಿ ಶಂಭಟ್ಟನವರ್ ಮತ್ತು ಶ್ರೀ.ಚಿದಂಬರ ಕುಲಕರ್ಣಿ ಅವರು ಆಗಮಿಸಿದ್ದರು. ಐ.ಓ.ಟಿ. ಯ ಮೂಲಭೂತ ಅಂಶಗಳು ಹಾಗೂ ಅದರ ಬಳಕೆಯನ್ನು ಸವಿಸ್ತಾರವಾಗಿ ವಿವರಿಸಿದರು. ಐ.ಓ.ಟಿ. ಕಿಟ್‌ನ ಮೂಲಕ ಪ್ರಾಯೋಗಿಕವಾಗಿ ಕಾರ್ಯನಿರ್ವಹಣೆಯನ್ನು ಪ್ರದರ್ಶಿಸಿದರು. ಅಧ್ಯಕ್ಷತೆವಹಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ವಿ.ಎ.ಕುಲಕರ್ಣಿಯವರು ಮುಂದಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ಐ.ಓ.ಟಿ. ತಂತ್ರಜ್ಞಾನವನ್ನು ಬಳಸಲಾಗುತ್ತದೆ, ಆದ ಕಾರಣ ವಿದ್ಯಾರ್ಥಿಗಳು ಸಕ್ರಿಯವಾಗಿ ಕಾರ್ಯಾಗಾರದಲ್ಲಿ ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ.ಮಹೇಂದ್ರ ದೀಕ್ಷಿತ್ ಅವರು ಸ್ವಾಗತಿಸುತ್ತ, ಕಾರ್ಯಕ್ರಮದ ಸಂಕ್ಷಿಪ್ತ ವಿವರವನ್ನು ನೀಡಿದರು . ಡೀನ್ ಎಫ್.ಐ.ಐ.ಐ. ಪ್ರೊ. ಸುಧೀರ್ ಕುಲಕರ್ಣಿ ಮುಖ್ಯ ಅತಿಥಿಗಳ ಕಿರು ಪರಿಚಯ ಮಾಡಿದರು. ಪ್ರೊ. ರಾಹುಲ್ ಸಿ ಎಂ ವಂದಿಸಿದರು. ಪ್ರೊ.ದೀಪಕ್ ಶರ್ಮ ನಿರೂಪಿಸಿದರು. ಪ್ರಥಮ ಹಾಗೂ ದ್ವಿತೀಯ ವರ್ಷದ 70ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಟಿ.ಎಂ. ಐ.ಎ.ಎಲ್.ಎಸ್. ಕಂಪನಿ ಮತ್ತು ಐ.ಐ.ಟಿ. ಮುಂಬೈ ಇ– ಯಂತ್ರ ರೋಬೋಟಿಕ್ಸ್ ಲ್ಯಾಬ್‌ನ ಸಂಯುಕ್ತಾಶ್ರಯದಲ್ಲಿ ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಪ್ರಾಂಶುಪಾಲರು

**Principal**
KLS Vishwanathrao Deshpande
Institute of Technology, Haliyal


ARNATAK LAW SOCIETY'S
ANATHRAO DESHPANDE
TUTE OF TECHNOLOGY
HALIYAL
KLS VDIT